ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ1[4]ಬಿ.ಆರ್.ಸಿ.:14/2012-13 ದಿನಾಂಕ:24-07-2012

## ಅಧಿಕೃತ ಜ್ಞಾಪನ

ವಿಷಯ: ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ [ಬಿ.ಆರ್.ಸಿ] ಹುದ್ದೆಯಲ್ಲಿ ಮೂರು ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿರುವ ಅಧಿಕಾರಿಗಳನ್ನು ತತ್ಸಮಾನ ಹುದ್ದೆಗಳಿಗೆ ಕೌನ್ಸಿಲಿಂಗ ಮೂಲಕ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ:-1.ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ.1.ಶಾಸನ.2007 ದಿ:01.09.2007
2.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.173.ಇಟಿಆರ್.2007 ದಿ:15.10.2007
3.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.37.ಇಟಿಆರ್.2009 ದಿ:23.04.2011
4.ಆಯುಕ್ತರು ಹಾಗೂ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ :ಸಶಿಅ/ ಶೈತ/ ಸಿ1/ಬಿಆರ್‌ಸಿ/2012-13 ದಿ:25-04-2012, 10.07.2012
5.ದಿನಾಂಕ:19-07-2012 ರಂದು ನಡೆದ ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆ.

-*****-

ಪ್ರಸ್ತಾವನೆ:-

ಪ್ರಾಥಮಿಕ ಶಿಕ್ಷಣ ಸಾರ್ವತ್ರೀಕರಣ ನಿಟ್ಟಿನಲ್ಲಿ ಮಕ್ಕಳ ಕಲಿಕಾ ಸಾಮರ್ಥ್ಯ ಉತ್ತಮ ಪಡಿಸುವ ಸಲುವಾಗಿ ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಕ್ಷೇತ್ರ ಸಂಪನ್ಮೂಲ ಕೇಂದ್ರಗಳಿಗೆ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ [ಬಿ.ಆರ್.ಸಿ] ಹುದ್ದೆಗಳನ್ನು ಲಿಖಿತ ಪರೀಕ್ಷೆ ಮೂಲಕ ಆಯ್ಕೆಯಾದ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಗ್ರೂಪ್.ಬಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ಭರ್ತಿ ಮಾಡಲು ನಿರ್ಧರಿಸಲಾಗಿದೆ.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ [ಶಿಕ್ಷಕರ ವರ್ಗಾವಣೆ ನಿಯಂತ್ರಣ] ನಿಯಮಗಳಲ್ಲಿ ನಿಯಮ-18 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಇರುವ ಅಧಿಕಾರವನ್ನು ಉಪಯೋಗಿಸಿಕೊಂಡು ನಿಯಮ-18 [ಡಿ] ಪ್ರಕಾರ ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ [ಬಿ.ಆರ್.ಸಿ] ಹುದ್ದೆಯಲ್ಲಿ ಮೂರು ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿರುವ ಅಧಿಕಾರಿಗಳನ್ನು ತತ್ಸಮಾನ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸಲು ತೀರ್ಮಾನಿಸಲಾಗಿದೆ.

ಅದರಂತೆ, ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ [ಬಿ.ಆರ್.ಸಿ] ಹುದ್ದೆಯಲ್ಲಿ ಮೂರು ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿರುವ ಅಧಿಕಾರಿಗಳು ದಿನಾಂಕ: 19-07-2012 ರಂದು ನಡೆದ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ತತ್ಸಮಾನ ಹುದ್ದೆಗಳನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಸ್ಥಳ ನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಆದೇಶ:-

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ [ಬಿ.ಆರ್.ಸಿ] ಹುದ್ದೆಯಲ್ಲಿ ಮೂರು ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿರುವ ಅಧಿಕಾರಿಗಳು ಅವರು ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸಲು ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗು ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

| ಕ್ರ. ಸಂ | ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಹೆಸರು, ವಿಳಾಸ [ಶ್ರೀ/ಶ್ರೀಮತಿ] | ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿ ಕೊಂಡಿರುವ ಹುದ್ದೆ ಮತ್ತು ಸ್ಥಳ |
|---|---|---|
| 1 | 2 | 3 |
| 1 | ಕೆ ಟಿ ನಿಂಗಪ್ಪ<br>ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ, ಕ್ಷೇತ್ರ ಸಂಪನ್ಮೂಲ ಕೇಂದ್ರ ಸರ್ವ ಶಿಕ್ಷಣ ಅಭಿಯಾನ, ಚನ್ನಗಿರಿ, ದಾವಣಗೆರೆ ಜಿಲ್ಲೆ | ಉಪನ್ಯಾಸಕರು<br>ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ದಾವಣಗೆರೆ |
| 2 | ಎಂ ಹನುಮಂತಪ್ಪ<br>ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ, ಕ್ಷೇತ್ರ ಸಂಪನ್ಮೂಲ ಕೇಂದ್ರ ಸರ್ವ ಶಿಕ್ಷಣ ಅಭಿಯಾನ, ದಾವಣಗೆರೆ ಉತ್ತರ, ದಾವಣಗೆರೆ ಜಿಲ್ಲೆ | ಉಪನ್ಯಾಸಕರು<br>ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ದಾವಣಗೆರೆ |

ಷರತ್ತುಗಳು

1. ಕೌನ್ಸಿಲಿಂಗ್‌ನಲ್ಲಿ ಇಚ್ಛೆಯಂತೆ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ ಸ್ಥಳ ನಿಯುಕ್ತಿಗೊಂಡ ಅಧಿಕಾರಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗು ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
2. ಅಧಿಕಾರಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
3. ನಿಯಂತ್ರಣಾಧಿಕಾರಿಗಳು ವರ್ಗಾವಣೆ ಹೊಂದಿರುವ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳನ್ನು ಬಿಡುಗಡೆ ಮಾಡುವಾಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ [ಶಿಕ್ಷಕರ ವರ್ಗವಣೆ ನಿಯಂತ್ರಣ] ನಿಯಮಗಳು 2007 ರ ನಿಯಮ 15 ರನ್ವಯ ಸೇವಾ ವಿವರವನ್ನು ಪರಿಶೀಲಿಸಿ ಬಿಡುಗಡೆ ಆದೇಶ ನೀಡಲು ತಿಳಿಸಿದೆ.
4. 15ನೇ ನಿಯಮದಡಿಯಲ್ಲಿ ಬಿಡುಗಡೆಯಾದಂತ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳು ಮುಂದಿನ ಮೂರು ವರ್ಷಗಳ ಅವಧಿಯವರೆಗೆ ವರ್ಗಾವಣೆಗೆ ಸಂಬಂಧಿಸಿದಂತೆ 11ನೇ ನಿಯಮದಡಿಯಲ್ಲಿ ಕೌನ್ಸಿಲಿಂಗ್‌ಗೆ ಅರ್ಹರಾಗಿರತಕ್ಕದ್ದಲ್ಲ.
5. ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗು ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.

[ಆಯುಕ್ತರ ಆದೇಶದ ಮೇರೆಗೆ]

[ವಿ.ಜಿ. ದಿವಾಕರ್]
ಅಪರ ಆಯುಕ್ತರು [ಆಡಳಿತ]

ಪ್ರತಿಯನ್ನು:-

1. ಸರ್ಕಾರದ ಕಾರ್ಯದರ್ಶಿಗಳು [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ] ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ / ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಬೆಂಗಳೂರು
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
4. ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
5. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ದಾವಣಗೆರೆ
6. ಉಪನಿರ್ದೇಶಕರು [ಆಡಳಿತ] ಸಾರ್ವಜನಿಕ ಶಿಕ್ಷಣ ಇಲಾಖೆ, ದಾವಣಗೆರೆ
7. ಉಪನಿರ್ದೇಶಕರು [ಅಭಿವೃದ್ಧಿ] ಡಯಟ್ ದಾವಣಗೆರೆ.
8. ಜಿಲ್ಲಾ ಉಪ ಯೋಜನಾ ಸಮನ್ವಯಾಧಿಕಾರಿಗಳು, ಸರ್ವ ಶಿಕ್ಷಣ ಅಭಿಯಾನ, ಉಪನಿರ್ದೇಶಕರು ಹಾಗು ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಛೇರಿ, ದಾವಣಗೆರೆ.
9. ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾಲ್ಲೂಕ್ ಪಂಚಾಯತಿ, ಚನ್ನಗಿರಿ, ದಾವಣಗೆರೆ.
10. ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
11. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಚನ್ನಗಿರಿ, ದಾವಣಗೆರೆ.
12. ಕಛೇರಿ ಪ್ರತಿ